**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು-65**

**ತುಮಕೂರು ಕೃಷಿ ಹವಾಮಾನ ಮುನ್ಸೂಚನೆ**

**ದಿನಾಂಕ: 7.8.2020**

**ಈ ವಾರದ ಮುನ್ಸೂಚನೆ (8.8.20 ರಿಂದ 12.8.20 ರ ವರೆಗೆ)**

| ನಿಯತಾಂಕಗಳು | 08-08-20 | 09-08-20 | 10-08-20 | 11-08-20 | 12-08-20 |
|---|---|---|---|---|---|
| ಮಳೆ (ಮಿ ಮಿ) | 0.0 | 29.1 | 12.9 | 15.2 | 1.5 |
| ಗರಿಷ್ಠ ಉಷ್ಣಾಂಶ(ಡಿ.ಸೆ.) | 28.6 | 30.3 | 26.2 | 25.7 | 27.7 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 19.6 | 19.6 | 18.9 | 19.3 | 18.5 |
| ಮೋಡ (ಪ್ರಮಾಣ) | 8 | 8 | 8 | 8 | 8 |
| ಅರ್ದ್ರತೆ ೭.೨೦ ಬೆ (ಶೇ) | 92 | 92 | 94 | 93 | 94 |
| ಅರ್ದ್ರತೆ ೨.೨೦ ಮ (ಶೇ) | 72 | 65 | 79 | 85 | 76 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 17 | 17 | 14 | 16 | 14 |
| ಗಾಳಿಯ ದಿಕ್ಕು (ಡಿಗ್ರಿ) | 249 | 293 | 283 | 248 | 248 |

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ತುಮಕೂರು ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಮೋಡ ಕವಿದ ವಾತಾವರಣವಿದ್ದು, **1.5–29.1 ಮಿ. ಮಿ.** ಮಳೆ೦ಯಾಗುವ ಸಂಭವವಿದೆ, ದಿನದ ಗರಿಷ್ಠ ಉಷ್ಣಾಂಶವು 25–30$^{o}$C ಮತ್ತು ಕನಿಷ್ಠ 18–19$^{o}$C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 92–94% ಇದ್ದು, ಮಧ್ಯಾಹ್ನ 65–85% ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 14–17 ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

**ಆಶ್ಲೇಷ ಮಳೆ**ಯು ಕಾಲವು **ಆಗಸ್ಟ್ ತಿಂಗಳ 03 ರಿಂದ ಆಗಸ್ಟ್ ತಿಂಗಳ 16 ರ ವರೆಗೆ** ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು **54.3 ಮಿ.ಮೀ. ವರೆಗೆ ಮಳೆ೦ಯಾಗುತ್ತದೆ**.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

- ತೇವಾಂಶದ ಸಂರಕ್ಷಣೆಗಾಗಿ ಮತ್ತು ಇರುವಂತಹ ಕಳೆ ನಿರ್ವಹಣೆಗೋಸ್ಕರ, ಒಂದೆರಡು ಬಾರಿ ಕುಂಟೆ ಹಾಯಿಸುವುದು
- ಕಳೆದ ಒಂದು ತಿಂಗಳಿನಿಂದ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದರಿಂದ ಕೃಷಿ ಹೊಂಡದಲ್ಲಿ ಶೇಕರಣೆಯಾಗಿರುವ ನೀರನ್ನು ಉಪಯೋಗಿಸಿ ಬೆಳೆಗಳಿಗೆ ರಕ್ಷಣಾತ್ಮಕ ನೀರಾವರಿಯನ್ನು ಕೊಡುವುದು ಸೂಕ್ತ.
- ಗುಲಾಬಿ: ಕಬ್ಬಿಣದ ಕೊರತೆಯಿಂದ ಎಲೆಗಳು ಹಳದಿ ಬಣ್ಣಕ್ಕೆ ತಿರುಗುತ್ತವೆ. ಹತೋಟಿ ಮಾಡಲು ಬಯೋ–20 ಅಥವಾ ಮಲ್ಟಿಪ್ಲೆಕ್ಸ್ ನ ಲಘು ಪೋಷಕಾಂಶಗಳನ್ನು ಕೊಡಬೇಕು.
- ದ್ವಿದಳ ಧಾನ್ಯ ಬೆಳೆಗಳನ್ನು ಬಿತ್ತುವ ಮುನ್ನ ಜೈವಿಕ ಗೊಬ್ಬರಗಳಾದ ರೈಜೋಬಿ೦ಯಮ್ ನಿಂದ ಬೀಜೋಪಚಾರ ಮಾಡಬೇಕು.

- ಆಗಸ್ಟ್ ತಿಂಗಳಲ್ಲಿ ಬಿತ್ತನೆ ಮಾಡಬೇಕಾದ ಬೆಳೆಗಳು: ತೇವಾಂಶದ ಆಧಾರದ ಮೇಲೆ ಬಿತ್ತನೆ ಮಾಡಬೇಕು

  ಏಕಬೆಳೆ ಪದ್ದತಿಯಲ್ಲಿ ಈ ಕೆಳಗಿನ ದೀರ್ಘಾವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ತೊಗರಿ : ಟಿ.ಟಿ.ಬಿ–7, ಬಿ.ಆರ್.ಜಿ–1,2,4 ಮತ್ತು 5

  ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ಮಧ್ಯಮು ಅವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ

  ರಾಗಿ: ಎಂ.ಆಲ್–365, ಕೆ,ಎಂ.ಆರ್–301 ಮತ್ತು 204, ಜಿ.ಪಿ.ಯು–28 ಮತ್ತು 66

  ನೆಲಗಡಲೆ: ಟಿ.ಎಮ್.ವಿ–2, ಜೆ.ಎಲ್–24, ಕೆ.ಸಿ.ಜಿ–2 ಮತ್ತು 6

  ಶಕ್ತಿಮಾನ್ ಜೋಳದ ತಳಿಗಳಾದ ಡೆಕ್ಕನ್–103, ವಿಜಯ ಕಾಂಪೋಸಿಟ್ ಮತ್ತು ಗಂಗಾ–11

  ಅಲಸಂದೆ: ಟಿ.ವಿ.ಎಕ್ಸ್–944, ಕೆ.ಬಿ.ಸಿ–1

  ಹೆಸರು:ಪಿ.ಎಸ್–16, ಪಿ.ಡಿ.ಎಮ್–84, 178 , ಉದ್ದು: ಕರಗಾವ್–3, ಟಿ–9, ರಶ್ಮಿ

  ನವಣೆ: ಆರ್.ಎಸ್–118, ಕೆ–221–1,ಪಿ.ಎಸ್–4, ಎಸ್.ಐ.ಎ–326

  ಸಾಮೆ: ಸಿ.ಒ–2, ಪಿ,ಆರ್.ಸಿ–3,ಒ.ಎಲ್.ಎಂ–203

  ಹಾರಕ: ಪಿ.ಎಸ್.ಸಿ–1, ಜೆ.ಎನ್.ಕೆ–364, ಆರ್.ಬಿ.ಕೆ–155, ಜಿ.ಪಿ.ಯು.ಕೆ–3

- ಜಾನುವಾರು: ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.

- ಸಸ್ಯ ಸಂರಕ್ಷಣೆ: ಗಾಳಿಯ ವೇಗವು ಹೆಚ್ಚಾಗಿರುವುದರಿಂದ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಔಷದ ಸಿಂಪಡಣೆಯನ್ನು ಮುಂದೂಡಿ.

- ಹೂ ಕೋಸು ಹಾಗೂ ಎಲೆ ಕೋಸುನಲ್ಲಿ ಎಲೆ ತಿನ್ನುವ ಹುಳು (ಡೈಮಂಡ್ ಬ್ಯಾಕ್ ಮಾತ್) ಕಂಡು ಬಂದಲ್ಲಿ ಹೂ ಕೋಸು ಹಾಗೂ ಎಲೆ ಕೋಸುಗಳ ಜೊತೆ ಟಮೋಟೊ ಗಿಡಗಳನ್ನು ಅಂತರ ಬೆಳೆಯಾಗಿ ಬೆಳೆದರೆ ಈ ಹುಳುಗಳ ಸಂಖ್ಯೆಯನ್ನು ನಿಯಂತ್ರಿಸಬಹುದು. ಅಲ್ಲದೇ, ಬೇವಿನ ಕಷಾಯ/ಎಣ್ಣೆಯನ್ನು ಸಿಂಪಡಣೆ ಮಾಡಬೇಕು.

**ನೋಡಲ್ ಅಧಿಕಾರಿ:**

**ಕೃಷಿ ಹವಾಮಾನ ವಿಭಾಗ**

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**